ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ: 23ನೇ ಜುಲೈ, 2019

ಮಾರಕ ಡೆಂಗ್ಯೂ ಜ್ವರದ ಸೋಂಕು ಹರಡುತ್ತಿರುವ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

104 (678) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ದಾಂಡೇಲಿ ಪಟ್ಟಣದಲ್ಲಿ ಮಳೆಗಾಲದ ಆರಂಭದಲ್ಲಿಯೇ ಮಾರಕ ಡೆಂಗ್ಯೂ ಜ್ವರದ ಹರಡಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; (ವಿವರ ನೀಡುವುದು)

(ಆ) ಈಗಾಗಲೇ ನಗರದಲ್ಲಿ ಡೆಂಗ್ಯೂ ಸೋಂಕಿತ ಸುಮಾರು 25 ಕ್ಕೂ ಹೆಚ್ಚಿನ ಜನರು ಸ್ಥಳೀಯ ವಿವಿಧ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದು, ಸ್ವಚ್ಛತೆ ಕಾಪಾಡುವಲ್ಲಿ ಹಾಗೂ ಸೊಳ್ಳೆಗಳನ್ನು ನಿಯಂತ್ರಿಸುವಲ್ಲಿ ನಗರಾಡಳಿತ ಸಂಪೂರ್ಣ ವಿಫಲವಾಗಿರುವುದು ನಿಜವೇ ; ಇದು ಮುಂದುವರೆದರೆ ಇನ್ನೂ ಹೆಚ್ಚಿನ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಈ ಬಗ್ಗೆ ಸರ್ಕಾರ ಸೂಕ್ತ ಕ್ರಮಕೈಗೊಳ್ಳಲಾಗುವುದೇ ? (ವಿವರ ನೀಡುವುದು)